Akashvani: Bangalore
National Bulletin In Kannada
16.10.2025 : 13.10hrs

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

16.10.2025 : 13.10hrs

*******

**ಮುಖ್ಯಾಂಶಗಳು**

1. ಆಂಧ್ರಪ್ರದೇಶದ ಕರ್ನೂಲ್‌ನಲ್ಲಿಂದು ಒಂದು ಸಾವಿರದ ೪೩೦ ಕೋಟಿ ರೂಪಾಯಿ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಪ್ರಧಾನಿ ನರೇಂದ್ರ ಮೋದಿ ಚಾಲನೆ
2. ಅದ್ಭುತ ದೇಶ ಭಾರತದೊಂದಿಗೆ ಅಮೆರಿಕದ ಉತ್ತಮ ಸಂಬಂಧವಿದೆ - ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್
3. ಬಿಹಾರ ವಿಧಾನಸಭಾ ಚುನಾವಣೆ ; ಅಭ್ಯರ್ಥಿಗಳ ಅಂತಿಮ ಪಟ್ಟಿ ಬಿಡುಗಡೆಗೊಳಿಸಿದ ಬಿಜೆಪಿ
4. ಡೆನ್ಮಾರ್ಕ್ ಓಪನ್ ಬ್ಯಾಡ್ಮಿಂಟನ್ ; ಪ್ರಿ ಕ್ವಾರ್ಟರ್ ಫೈನಲ್‌ನಲ್ಲಿಂದು ಲಕ್ಷ್ಯ ಸೇನ್-ಆಂಡರ್ಸ್ ಮುಖಾಮುಖಿ

**********

ಆಂಧ್ರಪ್ರದೇಶದ ಕರ್ನೂಲ್‌ನಲ್ಲಿ ಇಂದು ಮಧ್ಯಾಹ್ನ ಸುಮಾರು ಒಂದು ಸಾವಿರದ ೪೩೦ ಕೋಟಿ ರೂಪಾಯಿ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳನ್ನು ಪ್ರಧಾನಿ ನರೇಂದ್ರ ಮೋದಿ ಉದ್ಘಾಟನೆ ಹಾಗೂ ಶಿಲಾನ್ಯಾಸ ನೆರವೇರಿಸಲಿದ್ದಾರೆ. ಇಂದು ಬೆಳಗ್ಗೆ ಆಂಧ್ರಪ್ರದೇಶಕ್ಕೆ ಆಗಮಿಸಿದ ಅವರನ್ನು ವಿಮಾನ ನಿಲ್ದಾಣದಲ್ಲಿ ಮುಖ್ಯಮಂತ್ರಿ ಎನ್. ಚಂದ್ರಬಾಬು ನಾಯ್ಡು ಆತ್ಮೀಯವಾಗಿ ಬರಮಾಡಿಕೊಂಡರು. ಇದೇ ವೇಳೆ ರಾಜ್ಯಪಾಲ ಎಸ್. ಅಬ್ದುಲ್ ನಸೀರ್ ಮತ್ತು ಸಚಿವ ನಾರಾ ಲೋಕೇಶ್ ಉಪಸ್ಥಿತರಿದ್ದರು. ಪ್ರಧಾನಿ ಚಾಲನೆ ನೀಡುವ ಯೋಜನೆಗಳು ಕೈಗಾರಿಕೆ, ವಿದ್ಯುತ್ ಪ್ರಸರಣ, ರಸ್ತೆ, ರೈಲ್ವೆ, ರಕ್ಷಣಾ ಉತ್ಪಾದನೆ ಹಾಗೂ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸೇರಿದಂತೆ ಪ್ರಮುಖ ಕ್ಷೇತ್ರಗಳಿಗೆ ಸಂಬಂಧಿಸಿದ್ದಾಗಿವೆ. ಇದು ಪ್ರಾದೇಶಿಕ ಮೂಲಸೌಕರ್ಯವನ್ನು ಹೆಚ್ಚಿಸುವ, ಕೈಗಾರಿಕೀಕರಣವನ್ನು ವೇಗಗೊಳಿಸುವ ಮತ್ತು ರಾಜ್ಯದಲ್ಲಿ ಸಮಗ್ರ ಸಾಮಾಜಿಕ-ಆರ್ಥಿಕ ಬೆಳವಣಿಗೆಯನ್ನು ಉತ್ತೇಜಿಸುವ ಸರ್ಕಾರದ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ. ಈ ಸಂದರ್ಭದಲ್ಲಿ ಪ್ರಧಾನಿ ಸಾರ್ವಜನಿಕ ಸಭೆಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಭೇಟಿಯ ಭಾಗವಾಗಿ ಪ್ರಧಾನಿ ನರೇಂದ್ರ ಮೋದಿ ಅವರು, ನಂದ್ಯಾಲ್ ಜಿಲ್ಲೆಯ ಶ್ರೀಶೈಲಂನಲ್ಲಿರುವ, ಶ್ರೀ ಭ್ರಮರಾಂಬ ಮಲ್ಲಿಕಾರ್ಜುನ ಸ್ವಾಮಿ ದೇವಾಲಯಕ್ಕೆ ಭೇಟಿ ನೀಡಿ, ವಿಶೇಷ ಪೂಜೆ ಸಲ್ಲಿಸಿದ್ದಾರೆ. ಅಲ್ಲದೇ ಶ್ರೀಶೈಲಂನಲ್ಲಿರುವ ಶ್ರೀ ಶಿವಾಜಿ ಸ್ಫೂರ್ತಿ ಕೇಂದ್ರಕ್ಕೂ ಭೇಟಿ ನೀಡಲಿದ್ದಾರೆ.

**********

ಪ್ರಧಾನಿ ನರೇಂದ್ರ ಮೋದಿ ಅವರು ಮಹಾನ್ ನಾಯಕ ಮತ್ತು ಭಾರತ ಅದ್ಭುತ ದೇಶ ಎಂದು ಶ್ಲಾಘಿಸಿರುವ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಮಲೇಷಿಯಾದಲ್ಲಿ ನಡೆಯಲಿರುವ ಆಸಿಯಾನ್ ಶೃಂಗಸಭೆಯ ಸಂದರ್ಭದಲ್ಲಿ ಪ್ರಧಾನಿ ಮೋದಿ ಅವರನ್ನು ಭೇಟಿಯಾಗಲು ಎದುರು ನೋಡುತ್ತಿದ್ದೇನೆ ಎಂದು ಹೇಳಿದ್ದಾರೆ. ಶ್ವೇತಭವನದಲ್ಲಿಂದು ನಡೆದ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಭಾರತದೊಂದಿಗೆ ಅಮೆರಿಕ ಉತ್ತಮ ಸಂಬಂಧ ಹೊಂದಿದೆ. ಭಾರತ

ಒಂದು ಮೇರು ದೇಶ ಎಂದು ಹೇಳಿದರು. ಭಾರತದ ವ್ಯಾಪಾರ ಮಾತುಕತೆ ತಂಡವು ಅಮೆರಿಕದ ಅಧಿಕಾರಿಗಳೊಂದಿಗೆ ಮುಂದಿನ ಸುತ್ತಿನ ಮಾತುಕತೆಗಾಗಿ ವಾಷಿಂಗ್‌ಟನ್‌ನಲ್ಲಿರುವಾಗ ಅಮೆರಿಕ ಅಧ್ಯಕ್ಷರಿಂದ ಈ ಹೇಳಿಕೆ ಹೊರಬಿದ್ದಿದೆ.

**********

ಪ್ರಸ್ತುತ ಅಮೆರಿಕ ಆಡಳಿತವು ಭಾರತದೊಂದಿಗೆ ಇಂಧನ ಸಹಕಾರವನ್ನು ಮತ್ತಷ್ಟು ಬಲಗೊಳಿಸಲು ಆಸಕ್ತಿ ತೋರಿಸಿದೆ. ಮತ್ತು ಈ ನಿಟ್ಟಿನಲ್ಲಿ ಚರ್ಚೆಗಳು ನಡೆಯುತ್ತಿವೆ ಎಂದು ವಿದೇಶಾಂಗ ಸಚಿವಾಲಯಗಳ ವಕ್ತಾರ ರಣಧೀರ್ ಜೈಸ್ವಾಲ್ ತಿಳಿಸಿದ್ದಾರೆ. ಈ ಕುರಿತು ಸುದ್ದಿಗಾರರ ಪ್ರಶ್ನೆಗಳಿಗೆ ಪ್ರತಿಕ್ರಿಯಿಸಿದ ಅವರು, ಭಾರತ ಹಲವು ವರ್ಷಗಳಿಂದ ತನ್ನ ಇಂಧನ ಸಂಗ್ರಹಣೆಯನ್ನು ವಿಸ್ತರಿಸಲು ಪ್ರಯತ್ನಿಸುತ್ತಿವೆ. ಇದು ಕಳೆದ ದಶಕದಲ್ಲಿ ಸ್ಥಿರವಾಗಿ ಪ್ರಗತಿ ಸಾಧಿಸಿದೆ ಎಂದು ಹೇಳಿದರು. ಸ್ಥಿರ ಇಂಧನ ಬೆಲೆಗಳು ಮತ್ತು ಸುರಕ್ಷಿತ ಪೂರೈಕೆ ಖಚಿತಪಡಿಸಿಕೊಳ್ಳುವುದು ದೇಶದ ಇಂಧನ ನೀತಿಯ ಪ್ರಮುಖ ಗುರಿಗಳಾಗಿವೆ ಎಂದು ರಣಧೀರ್ ಜೈಸ್ವಾಲ್ ತಿಳಿಸಿದರು.

**********

ಭಯೋತ್ಪಾದನೆ, ಆರ್ಥಿಕ ಅಸ್ಥಿರತೆ ಮತ್ತು ಹವಾಮಾನ ಬದಲಾವಣೆಯಿಂದ ಉಂಟಾಗುವ ಸವಾಲುಗಳನ್ನು ಎದುರಿಸಲು ರಾಷ್ಟ್ರಗಳ ನಡುವೆ ಸಾಕಾರ ಹೆಚ್ಚಿಸುವ ಅಗತ್ಯವಿದೆ ಎಂದು ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಪ್ರತಿಪಾದಿಸಿದ್ದಾರೆ. ನಡೆದ ವಿಶ್ವಸಂಸ್ಥೆಗೆ ಸೇನಾ ಕೊಡುಗೆ ನೀಡುವ ರಾಷ್ಟ್ರಗಳ ಮುಖ್ಯಸ್ಥರ ಸಮಾವೇಶ ಉದ್ದೇಶಿಸಿ ನವದೆಹಲಿಯಲ್ಲಿಂದು ಮಾತನಾಡಿದ ಸಚಿವರು, ಈ ಸವಾಲುಗಳು ಪರಸ್ಪರ ಸಂಬಂಧ ಹೊಂದಿದ್ದು, ರಾಷ್ಟ್ರೀಯ ಗಡಿಗಳನ್ನು ಮೀರಿವೆ ಎಂದು ಹೇಳಿದರು. ಎಲ್ಲಾ ಸಮಾಜ ಮತ್ತು ಜನರಿಗೆ ನ್ಯಾಯ, ಘನತೆ, ಅವಕಾಶ ಮತ್ತು ಸಮೃದ್ಧಿಯನ್ನು ಭಾರತ ನಿರಂತರವಾಗಿ ಪ್ರತಿಪಾದಿಸುತ್ತಿದೆ. ಅಲ್ಲದೇ ಶಾಂತಿಪಾಲನೆಯನ್ನು ನಾಗರಿಕತೆಯ ನೀತಿಯಾಗಿ ಪರಿಗಣಿಸುತ್ತದೆ ಹಾಗೂ ಜಗತ್ತನ್ನು ಒಂದೇ ಕುಟುಂಬವಾಗಿ ನೋಡುತ್ತದೆ. ಬಹುಪಕ್ಷೀಯತೆ ಮತ್ತು ಅಂತಾರಾಷ್ಟ್ರೀಯ ಪಾಲುದಾರಿಕೆಗಳಲ್ಲಿ ಭಾರತ ನಂಬಿಕೆ ಹೊಂದಿದೆ ಎಂದು ಸಚಿವ ಡಾ. ಎಸ್. ಜೈಶಂಕರ್ ತಿಳಿಸಿದರು.

****ಧ್ವನಿ **** ಡಾ. ಎಸ್. ಜೈಶಂಕರ್

**********

ನವದೆಹಲಿಯ ಉಪರಾಷ್ಟ್ರಪತಿ ಭವನದಲ್ಲಿ ಇಂದು ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಅವರನ್ನು ಬ್ರೆಜಿಲ್ ಉಪಾಧ್ಯಕ್ಷ ಜೆರಾಲ್ಡೊ ಅಲ್ಕ್ಮಿನ್ ಭೇಟಿಯಾಗಿ ಮಾತುಕತೆ ನಡೆಸಿದರು. ಅವರು ಇಂದು, ಮಧ್ಯಾಹ್ನ ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಅವರೊಂದಿಗೆ ಸಭೆ ನಡೆಸಲಿದ್ದಾರೆ. ನಂತರ ಅವರು, ರಕ್ಷಣಾ ಸಚಿವ ರಾಜನಾಥ್ ಸಿಂಗ್, ವಿದೇಶಾಂಗ ಸಚಿವ ಡಾ. ಎಸ್.ಜೈಶಂಕರ್ ಹಾಗೂ ಕೇಂದ್ರ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವ ಹರ್ದೀಪ್ ಪುರಿ ಅವರನ್ನು ಭೇಟಿ ಮಾಡಿ, ಪರಸ್ಪರ ಆಸಕ್ತಿಯ ವಿವಿಧ ವಿಷಯಗಳ ಬಗ್ಗೆ ಚರ್ಚಿಸಲಿದ್ದಾರೆ.

**********

ಶ್ರೀಲಂಕಾ ಪ್ರಧಾನಿ ಹರಿಣಿ ಅಮರಸೂರ್ಯ ಅವರು, ಮೂರು ದಿನಗಳ ಭಾರತ ಭೇಟಿಗಾಗಿ ಇಂದು ನವದೆಹಲಿಗೆ ಆಗಮಿಸಿದರು. ಪ್ರಧಾನಿಯಾಗಿ ಅಧಿಕಾರ ವಹಿಸಿಕೊಂಡ ನಂತರ ಹರಿಣಿ ಅಮರಸೂರ್ಯ ಅವರ ಮೊದಲ ಭಾರತ ಭೇಟಿ

ಇದಾಗಿದೆ. ಈ ಕುರಿತು ಮಾಹಿತಿ ನೀಡಿದ ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್, ಶ್ರೀಲಂಕಾ ಪ್ರಧಾನಿ ಹರಿಣಿ ಅಮರಸೂರ್ಯ ಅವರ ಭೇಟಿ ಭಾರತ-ಶ್ರೀಲಂಕಾ ನಡುವಿನ ನಿಯಮಿತ ಮತ್ತು ನಿಕಟ ಸಂಬಂಧಗಳ ಸಂಪ್ರದಾಯವನ್ನು ಮುಂದುವರಿಸುತ್ತದೆ. ಇದು ಆಳವಾಗಿ ಬೇರೂರಿರುವ ಸ್ನೇಹ ಸಂಬಂಧಗಳನ್ನು ಬಲಪಡಿಸುತ್ತದೆ ಎಂದು ಹೇಳಿದ್ದಾರೆ. ಭೇಟಿಯ ಸಮಯದಲ್ಲಿ ಶ್ರೀಲಂಕಾ ಪ್ರಧಾನಿ ಹರಿಣಿ ಅಮರಸೂರ್ಯ ಅವರು, ಪ್ರಧಾನಿ ನರೇಂದ್ರ ಮೋದಿ ಮತ್ತು ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಮಾತುಕತೆ ನಡೆಸಲಿದ್ದಾರೆ.

**********

ಈಜಿಪ್ಟ್ ವಿದೇಶಾಂಗ ಸಚಿವ ಬದರ್ ಅಬ್ದೆಲಟ್ಟಿ ಎರಡು ದಿನಗಳ ಭಾರತ ಭೇಟಿಗಾಗಿ ಇಂದು ನವದೆಹಲಿಗೆ ಆಗಮಿಸಿದರು. ಈ ಬಗ್ಗೆ ಮಾಹಿತಿ ನೀಡಿದ ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್, ಈಜಿಪ್ಟ್ ವಿದೇಶಾಂಗ ಸಚಿವರು ಭಾರತ-ಈಜಿಪ್ಟ್ ಕಾರ್ಯತಂತ್ರದ ಸಂವಾದದಲ್ಲಿ ಪಾಲ್ಗೊಳ್ಳಲಿದ್ದಾರೆ. ಈಜಿಪ್ಟ್ ವಿದೇಶಾಂಗ ಸಚಿವರ ಈ ಭೇಟಿಯು ಕಾರ್ಯತಂತ್ರ ಪಾಲುದಾರಿಕೆಯ ಅನುಷ್ಠಾನದಲ್ಲಿನ ಪ್ರಗತಿಯನ್ನು ಪರಿಶೀಲಿಸಲು ಹಾಗೂ ಉಭಯ ರಾಷ್ಟ್ರಗಳ ನಡುವಿನ ಪ್ರಾದೇಶಿಕ ಮತ್ತು ಜಾಗತಿಕ ಸಮಸ್ಯೆಗಳ ಕುರಿತು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಳ್ಳಲು ಒಂದು ಅವಕಾಶವಾಗಿದೆ ಎಂದು ಹೇಳಿದರು. ಭೇಟಿಯ ಸಮಯದಲ್ಲಿ ಈಜಿಪ್ಟ್ ವಿದೇಶಾಂಗ ಸಚಿವರು, ಪ್ರಧಾನಿ ನರೇಂದ್ರ ಮೋದಿ, ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಹಾಗೂ ಕೇಂದ್ರ ವಾಣಿಜ್ಯ ಹಾಗೂ ಕೈಗಾರಿಕಾ ಸಚಿವ ಪಿಯೂಶ್ ಗೋಯಲ್ ಅವರೊಂದಿಗೆ ಮಾತುಕತೆ ನಡೆಸಲಿದ್ದಾರೆ.

**********

ಬಿಹಾರ ವಿಧಾನಸಭಾ ಚುನಾವಣೆ ಹಿನ್ನೆಲೆಯಲ್ಲಿ ೧೮ ಅಭ್ಯರ್ಥಿಗಳ ಮೂರನೇ ಪಟ್ಟಿಯನ್ನು ಬಿಜೆಪಿ ಬಿಡುಗಡೆ ಮಾಡಿದೆ. ಇದರೊಂದಿಗೆ ಎನ್‌ಡಿಎನಲ್ಲಿ ಸ್ಥಾನ ಹಂಚಿಕೆ ಒಪ್ಪಂದದ ಭಾಗವಾಗಿ ಬಿಜೆಪಿ ಪಡೆದ ಎಲ್ಲಾ ೧೦೧ ಸ್ಥಾನಗಳಿಗೆ ಪಕ್ಷ ತನ್ನ ಅಭ್ಯರ್ಥಿಗಳನ್ನು ಘೋಷಿಸಿದೆ. ಹರ್‌ಸಿದ್ಧಿ ಕ್ಷೇತ್ರದಿಂದ ಕೈಗಾರಿಕಾ ಸಚಿವ ಕೃಷ್ಣಾನಂದನ್ ಪಾಸ್ವಾನ್, ಲೌರಿಯಾ ಕ್ಷೇತ್ರದಿಂದ ಜಾನಪದ ಗಾಯಕ ಬಿಹಾರಿ ಕಣಕ್ಕಿಳಿಯಲಿದ್ದಾರೆ. ಇದೇ ವೇಳೆ ಉಪೇಂದ್ರ ಕುಶ್ವಾಹ ನೇತೃತ್ವದ ರಾಷ್ಟ್ರೀಯ ಲೋಕಾ ಮೋರ್ಚಾ ತನಗೆ ಹಂಚಿಕೆಯಾದ ಸ್ಥಾನಗಳಿಗೆ ಅಭ್ಯರ್ಥಿಗಳ ಪಟ್ಟಿಯನ್ನು ಪ್ರಕಟಿಸಿದೆ. ಉಭಯ ಕುಶ್ವಾಹ ಅವರ ಪತ್ನಿ ಸ್ನೇಹಲತಾ, ಸಸರಾಮ್ ವಿಧಾನಸಭಾ ಕ್ಷೇತ್ರದಿಂದ ಸ್ಪರ್ಧಿಸಲಿದ್ದಾರೆ.

**********

ಜಮ್ಮು ಮತ್ತು ಕಾಶ್ಮೀರದಾದ್ಯಂತ ಹರಡಿರುವ ಭಯೋತ್ಪಾದಕ ಜಾಲಗಳ ಮೇಲೆ ಪ್ರಮುಖ ದಾಳಿ ನಡೆಸಿರುವ ರಿಯಾಸಿ ಜಿಲ್ಲಾ ಪೊಲೀಸರು, ಪಾಕಿಸ್ತಾನ ಮೂಲದ ಭಯೋತ್ಪಾದಕ ಮೊಹಮ್ಮದ್ ಶರೀಫ್ ಮಿರಾಸಿಗೆ ಸೇರಿದ ಆಸ್ತಿಯನ್ನು ಮುಟ್ಟುಗೋಲು ಹಾಕಿಕೊಂಡಿದ್ದಾರೆ. ಶರೀಫ್ ಮಿರಾಸಿ ೨೦೦೦ ಇಸವಿಯಲ್ಲಿ ಭಯೋತ್ಪಾದಕ ಸಂಘಟನೆಗೆ ಸೇರಿದ್ದ. ನಂತರ ಭಾರತದ ವಿರುದ್ಧ ದಾಳಿ ಮಾಡುವ ಉದ್ದೇಶದಿಂದ ಶಸ್ತ್ರಾಸ್ತ್ರ ಖರೀದಿ ಮತ್ತು ಭಯೋತ್ಪಾದನಾ ತರಬೇತಿಗಾಗಿ ೨೦೧೦ರಲ್ಲಿ ಪಾಕಿಸ್ತಾನಕ್ಕೆ ತೆರಳಿದ್ದ. ಆರಂಭದಲ್ಲಿ ಹಿಜ್ಬುಲ್ ಮುಜಾಹಿದ್ದೀನ್ ನೊಂದಿಗೆ ಸಂಪರ್ಕ ಹೊಂದಿದ್ದ ಆತ. ನಂತರ ಲಷ್ಕರೇ ತೈಬಾದೊಂದಿಗೆ ಸಂಬಂಧ ಹೊಂದಿದ್ದ. ಗಡಿಯಾಚೆಯಿಂದ ಜಮ್ಮು ಮತ್ತು ಕಾಶ್ಮೀರದಲ್ಲಿ ಭಯೋತ್ಪಾದನಾ ಕೃತ್ಯಗಳಿಗೆ ಸಹಾಯ ಮಾಡುವುದನ್ನು ಮುಂದುವರಿಸಿದ್ದ.

**********

ಭೂಮಿಯ ವಾತಾವರಣದಲ್ಲಿನ ಇಂಗಾಲದ ಡೈಆಕ್ಸೈಡ್ ಇದುವರೆಗೆ ದಾಖಲಾದ ಅತ್ಯಧಿಕ ಮಟ್ಟವನ್ನು ತಲುಪಿದೆ ಎಂದು ವಿಶ್ವ ಹವಾಮಾನ ಸಂಸ್ಥೆ ತಿಳಿಸಿದೆ. ಇದು ಭೂಮಿಯ ಉಷ್ಣಾಂಶ ಮತ್ತಷ್ಟು ಹೆಚ್ಚಿಸುವ ಜೊತೆಗೆ ತೀವ್ರವಾದ ಹವಾಮಾನ ಬದಲಾವಣೆಗಳಿಗೆ ಕಾರಣವಾಗಬಹುದು ಎಂದು ಅದು ಹೇಳಿದೆ. ವಿಶ್ವ ಹವಾಮಾನ ಸಂಸ್ಥೆಯ ನೂತನ ವರದಿಯ ಪ್ರಕಾರ, ೨೦೨೩ ರಿಂದ ೨೦೨೪ರವರೆಗೆ ಜಾಗತಿಕ ಸರಾಸರಿ ಇಂಗಾಲದ ಡೈಆಕ್ಸೈಡ್ ಸಾಂಧ್ರತೆ ದಶಲಕ್ಷಕ್ಕೆ ೩.೫ರಷ್ಟು ಹೆಚ್ಚಾಗಿವೆ. ಇದು ೧೯೫೭ ರಿಂದ ಇಲ್ಲಿಯವರೆಗಿನ ಅತ್ಯಧಿಕ ಹೆಚ್ಚಳವಾಗಿದೆ.

**********

ಡೆನ್ಮಾರ್ಕ್ ಓಪನ್ ಬ್ಯಾಡ್ಮಿಂಟನ್ ಪಂದ್ಯಾವಳಿಯಲ್ಲಿ ಭಾರತದ ಸ್ಟಾರ್ ಶಟ್ಲರ್ ಲಕ್ಷ್ಯಸೇನ್ ಇಂದು ಪ್ರಿ-ಕ್ವಾರ್ಟರ್ ಫೈನಲ್‌ನಲ್ಲಿ ಡೆನ್ಮಾರ್ಕ್‌ನ ಆಂಡರ್ಸ್ ಆಂಟನ್ಸೆನ್ ಅವರನ್ನು ಎದುರಿಸಲಿದ್ದಾರೆ. ಪುರುಷರ ಡಬಲ್ಸ್‌ನಲ್ಲಿ, ಸಾತ್ವಿಕ್ ಸಾಯಿರಾಜ್ ರಾಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಜೋಡಿಯು ಇಂದು ಪ್ರಿ-ಕ್ವಾರ್ಟರ್ ಫೈನಲ್‌ನಲ್ಲಿ ಚೈನೀಸ್ ತೈಪೆಯ ಯಾಂಗ್ ಪೊ-ಹಾನ್ ಮತ್ತು ಲಿಯು ಕುವಾಂಗ್-ಹೆಂಗ್ ಅವರನ್ನು ಎದುರಿಸಲಿದೆ.

**********

ಐಸಿಸಿ ಮಹಿಳಾ ಕ್ರಿಕೆಟ್ ವಿಶ್ವಕಪ್ ಪಂದ್ಯಾವಳಿಯ ವಿಶಾಖಪಟ್ಟಣದ ಎಸಿಎ-ವಿಡಿಸಿಎ ಕ್ರಿಕೆಟ್ ಕ್ರೀಡಾಂಗಣದಲ್ಲಿಂದು ನಡೆಯುವ ಪಂದ್ಯದಲ್ಲಿ ಆಸ್ಟ್ರೇಲಿಯಾ ತಂಡ, ಬಾಂಗ್ಲಾದೇಶವನ್ನು ಎದುರಿಸಲಿದೆ. ಪಂದ್ಯ ಮಧ್ಯಾಹ್ನ ೩ ಗಂಟೆಗೆ ಆರಂಭವಾಗಲಿದೆ.

*****END*****